# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1078
ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು
ಉತ್ತರಿಸುವ ದಿನಾಂಕ : 23-02-2024.
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ದಿನದಿಂದ ದಿನಕ್ಕೆ ಭಿಕ್ಷುಕರ ಸಂಖ್ಯೆ ಹೆಚ್ಚಾಗುತ್ತಿದ್ದು, ಜನರಿಗೆ Traffic Signals and Circes ನಲ್ಲಿ ಹಲವಾರು ಬಾರಿ ಇವರ ಭಿಕ್ಷಾಟನೆಯಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು; | ಬಂದಿದೆ.<br><br>ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ 1975 ರ ಸೆಕ್ಷನ್ 3 ರನ್ವಯ ರಾಜ್ಯದಲ್ಲಿ ಭಿಕ್ಷಾಟನೆಯನ್ನು ನಿಷೇಧಿಸಲಾಗಿದ್ದು, ಸದರಿ ಅಧಿನಿಯಮದನ್ವಯ 16 ವರ್ಷ ಮೇಲ್ಪಟ್ಟ ಪುರುಷರು ಹಾಗೂ 18 ವರ್ಷ ಮೇಲ್ಪಟ್ಟ ಮಹಿಳೆಯರು ಭಿಕ್ಷಾಟನೆಯಲ್ಲಿ ತೊಡಗಿದ್ದಲ್ಲಿ ಅಂತಹ ಭಿಕ್ಷುಕರನ್ನು ನಿಯಮಾನುಸಾರ ಬಂಧಿಸಿ, ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿ ಪುನರ್ ವಸತಿ ಸೌಲಭ್ಯ ಕಲ್ಪಿಸಲಾಗುತ್ತಿದೆ. |
| ಆ) | ಬೆಂಗಳೂರು ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಭಿಕ್ಷಾಟನೆ ದಂಧೆಯಲ್ಲಿ ಮಹಿಳೆಯರು ಮತ್ತು ಮಕ್ಕಳೇ ಹೆಚ್ಚು ಪಾಲುಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 16 ವರ್ಷಗಳಿಗಿಂತ ಹಾಗೂ 18 ವರ್ಷಗಳಿಗಿಂತ ಕಡಿಮೆ ವಯಸ್ಸಿನ ಗಂಡು ಹಾಗೂ ಹೆಣ್ಣು ಮಕ್ಕಳು ಭಿಕ್ಷಾಟನೆಯಲ್ಲಿ ತೊಡಗಿದ್ದಲ್ಲಿ ಅಂತಹವರನ್ನು ಬಂಧಿಸಿ, ರಕ್ಷಣೆ ನೀಡಿ ಮಹಿಳಾ ಮತ್ತು ಮಕ್ಕಳ ರಕ್ಷಣಾ ಕೇಂದ್ರಗಳಿಗೆ ಕಳುಹಿಸಿ, ಪುನರ್ ವಸತಿ ಸೌಲಭ್ಯ ಕಲ್ಪಿಸಲಾಗುತ್ತಿದೆ. |
| ಇ) | ಸದರಿ ಭಿಕ್ಷುಕರ ಪುನರ್ ಚೇತನ ಮತ್ತು ಪುನರ್ ವಸತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಕೇಂದ್ರ ಪರಿಹಾರ ಸಮಿತಿ ವ್ಯಾಪ್ತಿಯಡಿ ರಾಜ್ಯಾದ್ಯಂತ ಒಟ್ಟು 14 ನಿರಾಶ್ರಿತರ ಪರಿಹಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಕೇಂದ್ರಗಳ ರಕ್ಷಣೆಯಲ್ಲಿರುವ ನಿರಾಶ್ರಿತರಿಗೆ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>1. ಉಚಿತವಾಗಿ ತಿಂಡಿ-ಊಟ, ಸಮವಸ್ತ್ರ, ಹಾಸಿಗೆ-ಹೊದಿಕೆ, ಔಷಧೋಪಚಾರ ನೀಡಲಾಗುತ್ತಿದೆ.<br>2. ಬಂಧಿತ ನಿರಾಶ್ರಿತರ ವಿಳಾಸಗಳನ್ನು ಪತ್ತೆ ಮಾಡಿ, ಸದರಿಯವರ ಪೋಷಕರು/ ಸಂಬಂಧಿಕರ ವಶಕ್ಕೆ ಕಳುಹಿಸಲು ಕ್ರಮವಹಿಸಲಾಗುತ್ತಿದೆ.<br>3. ನಿರಾಶ್ರಿತರಿಗೆ ನಿರಾಶ್ರಿತರ ಪರಿಹಾರ ಕೇಂದ್ರದ ವ್ಯಾಪ್ತಿಯಲ್ಲಿ ಲಭ್ಯವಿರುವ ಜಮೀನಿನಲ್ಲಿ ಹೈನುಗಾರಿಕೆ, ತೋಟಗಾರಿಕೆ, ತರಬೇತಿ ಕಾರ್ಯಕ್ರಮವನ್ನು ನೀಡಲಾಗುತ್ತಿದೆ. |

| | | |
|---|---|---|
| | | 4. ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿ ಹ್ಯಾಂಡ್ ಲೂಮ್ಸ್, ಕೈಮಗ್ಗ, ಕೌಶಲ್ಯ ತರಬೇತಿ, ಸಿದ್ಧಉಡುಪು, ತಯಾರಿಕೆ ತರಬೇತಿ ನೀಡಲಾಗುತ್ತಿದೆ.<br>5. ದೃಢಕಾಯ ನಿರಾಶ್ರಿತರಿಗೆ ನಿರಾಶ್ರಿತರ ಪರಿಹಾರ ಕೇಂದ್ರಗಳಿಂದ ಬಿಡುಗಡೆ ಹೊಂದಿದ ನಂತರ ಪುನಃ ಭಿಕ್ಷಾಟನೆಗೆ ಮರಳದಂತೆ ವಿವಿಧ ವೃತ್ತಿಪರ ತರಬೇತಿಗಳನ್ನು ನೀಡಲಾಗುತ್ತಿದ್ದು, ತರಬೇತಿ ಪಡೆದ ನಿರಾಶ್ರಿತರಿಗೆ ದಿನವೊಂದಕ್ಕೆ ರೂ.75/-ಗಳ ದಿನಭತ್ಯೆಯನ್ನು ಪಾವತಿಸಲು ಕ್ರಮವಹಿಸಲಾಗುತ್ತಿದೆ. |

**No: SWD/4/SBR/2024**

(**ಡಾ||ಹೆಚ್.ಸಿ.ಮಹದೇವಪ್ಪ**)
ಸಮಾಜ ಕಲ್ಯಾಣ ಸಚಿವರು.